## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 64 (07) |
| ಸದಸ್ಯರ ಹೆಸರು | : ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : 04.12.2023 |
| ಉತ್ತರಿಸಬೇಕಾದ ಸಚಿವರು | : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 1995ರ ನಂತರ ಪ್ರಾರಂಭವಾಗಿ ಅನುದಾನಕ್ಕೆ ಒಳಪಡದ ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | 1995ರ ನಂತರ ಆರಂಭವಾದ ಅನುದಾನ ರಹಿತ ಕನ್ನಡ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಹಿಂದಿನ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ, ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿ ರವರ ಸಮ್ಮುಖದಲ್ಲಿ ಏರ್ಪಡಿಸಲಾಗಿದ್ದ ಸಭೆಯಲ್ಲಿ, 1995 ರಿಂದ 2019 ರವರೆಗೆ ಪ್ರತಿ 05 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳೆಷ್ಟು? ಸದರಿ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು / ಉಪನ್ಯಾಸಕರುಗಳು / ಬೋಧಕೇತರರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಕ್ರೋಢೀಕೃತ ಮಾಹಿತಿಯನ್ನು ಪಡೆಯಲು ತೀರ್ಮಾನಿಸಲಾಯಿತು. ಅದರಂತೆ, ಎಲ್ಲಾ ಮೂರು ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಮಾಹಿತಿಯನ್ನು ಪಡೆಯಲು ಕ್ರಮವಹಿಸಲಾಗಿರುತ್ತದೆ. |
| ಆ) | 1995ರ ನಂತರದ ಅನುದಾನ ರಹಿತ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಮತ್ತು ಇತರೆ ಸಿಬ್ಬಂದಿಗಳಿಗೆ ನಿವೃತ್ತಿ ವಯಸ್ಸು ಸಮೀಪಿಸುತ್ತಿರುವುದರಿಂದ ಕೂಡಲೇ ಅನುದಾನಕ್ಕೆ ಒಳಪಡಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ? | |

ಸಂಖ್ಯೆ: ಇಪಿ 359 ಪಿಎಂಸಿ 2023

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.